# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ ಕಾರ್ಯಕ್ರಮಕ್ಕೆ (SHC) ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ
1. ಸರ್ಕಾರದ ಆದೇಶ ಸಂಖ್ಯೆ: ಕೃಇ 65 ಕೃಉಇ 2018, ದಿನಾಂಕ: 10.07.2018 & ತಿದ್ದುಪಡಿ ದಿ: 11.10.2018.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 65 ಕೃಉಇ 2018, ದಿನಾಂಕ: 24.07.2018.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 65 ಕೃಉಇ 2018, ದಿನಾಂಕ: 25.01.2019.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 16-1/2015 Fert Use (i), (ii) & (iii) ದಿನಾಂಕ: 28.02.2019.
5. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 1 BGL 2018, ದಿನಾಂಕ: 08.03.2019.
6. ಕೃಷಿ ನಿರ್ದೇಶಕರ ಪತ್ರ ಸಂ: ಉಕೃನಿ(ಮ.ಆ.ಅ)/03/2018-19, ದಿನಾಂಕ: 02.03.2019.

ಪ್ರಸ್ತಾವನೆ:

2018-19ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಗೆ ಲೆಕ್ಕ ಶೀರ್ಷಿಕೆ: 2401-00-108-1-16ರಡಿ ರೂ. 6065.00 ಲಕ್ಷ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ (SHC) ಕಾರ್ಯಕ್ರಮದಡಿ 2017-18ನೇ ಸಾಲಿನ ಮರುಮೌಲ್ಯೀಕೃತ ಅನುದಾನ ರೂ. 66.92 ಲಕ್ಷಗಳನ್ನು ಬಿಡುಗಡೆ ಮಾಡಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ (SHC) ಕಾರ್ಯಕ್ರಮದ ಅನುಷ್ಠಾನಕ್ಕೆ ರೂ. 1392.22 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ ಕಾರ್ಯಕ್ರಮಕ್ಕೆ (SHC) ಸಂಬಂಧಿಸಿದಂತೆ, 2017-18ನೇ ಸಾಲಿನಲ್ಲಿ ಬಿಡುಗಡೆಗೆ ಬಾಕಿ ಉಳಿದಿದ್ದ, 2ನೇ ಕಂತಿನ ಅನುದಾನ ಒಟ್ಟಾರೆ ರೂ. 630.92 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಕೇಂದ್ರ ಸರ್ಕಾರದ ಪತ್ರದಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ ಕಾರ್ಯಕ್ರಮಕ್ಕೆ ಕೇಂದ್ರದ ಪಾಲಿನ 2ನೇ ಕಂತಿನ ಅನುದಾನವನ್ನಾಗಿ ರೂ. 835.33 ಲಕ್ಷಗಳನ್ನು ಬಿಡುಗಡೆಗೊಳಿಸಿರುತ್ತದೆ.

ಸದರಿ ಕೇಂದ್ರ ಸರ್ಕಾರದ ಅನುದಾನ ರೂ. 835.33 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ಮೇಲೆ ಓದಲಾದ (5)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ದೃಢೀಕರಿಸಲಾಗಿರುತ್ತದೆ.

ಮೇಲೆ ಓದಲಾದ (6)ರ ಕೃಷಿ ನಿರ್ದೇಶಕರ ಪತ್ರದಲ್ಲಿ 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ ಕಾರ್ಯಕ್ರಮದಡಿ ಕೇಂದ್ರ ಸರ್ಕಾರದಿಂದ ರೂ. 835.33 ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ. 556.89 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 1392.22 ಲಕ್ಷಗಳನ್ನು 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-108-1-16 ರಡಿ ಈ ಕೆಳಕಂಡಂತೆ ಉಪ ಶೀರ್ಷಿಕೆವಾರು ಬಿಡುಗಡೆ ಮಾಡುವಂತೆ ಕೋರಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ಘಟಕ | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
|---|---|---|---|---|
| 1 | 059 | 787.59 | 525.06 | 1312.65 |
| 2 | 106 | 47.74 | 31.83 | 79.57 |
| ಒಟ್ಟು | | **835.33** | **556.89** | **1392.22** |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-108-1-16ರಡಿ ಹಾಲಿ ಲಭ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 65 ಕೃಉಇ 2018, ಬೆಂಗಳೂರು, ದಿನಾಂಕ: 18.03.2019.**

ಕೇಂದ್ರ ಪುರಸ್ಕೃತ "National Mission on Sustainable Agriculture" (NMSA) ಯೋಜನೆಯಡಿಯ ಮಣ್ಣು ಆರೋಗ್ಯ ಚೀಟಿ ಕಾರ್ಯಕ್ರಮಕ್ಕೆ (SHC) ಸಂಬಂಧಿಸಿದಂತೆ, ಕೇಂದ್ರದ ಪಾಲಿನ ಅನುದಾನದೊಂದಿಗೆ ರಾಜ್ಯದ ಪಾಲಿನ ಶೇ. 40ರ ಅನುದಾನ ಸೇರಿ ಒಟ್ಟಾರೆ ರೂ. **1249.04 ಲಕ್ಷಗಳನ್ನು** (ಒಂದು ಸಾವಿರದ ಎರಡಯ ನೂರ ನಲವತ್ತೊಂಭತ್ತು ಲಕ್ಷದ ನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಈ ಕೆಳಕಂಡಂತೆ 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-108-1-16 ಅಡಿ ಬಿಡುಗಡೆ ಮಾಡುತ್ತಾ, ಸದರಿ ಅನುದಾನವನ್ನು ಮಾರ್ಗಸೂಚಿಯಂತೆ ಘಟಕವಾರು, ವರ್ಗವಾರು ನಿಗದಿತ ಪ್ರಮಾಣದಲ್ಲಿ ಹಂಚಿಕೆ ಮಾಡಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

| ಕ್ರಸಂ. | ಉಪ ಶೀರ್ಷಿಕೆ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|
| 1 | 059 | 1169.47 |
| 2 | 106 | 79.57 |
| ಒಟ್ಟು | | **1249.04** |

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

--

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿಎಫ್‌ಪಿ 2018, ದಿನಾಂಕ: 03.04.2018 ರಲ್ಲಿ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

18/03/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು,/ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
12. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
13. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.